# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ – ೩<br>Part – III | ಬೆಂಗಳೂರು, ಬುಧವಾರ, ೧೮, ಫೆಬ್ರವರಿ, ೨೦೨೬ ( ಮಾಘ , ೨೯, ಶಕವರ್ಷ, ೧೯೪೭)<br>BENGALURU, WEDNESDAY, 18, FEBRUARY, 2026 ( MAGHA , 29, SHAKAVARSHA, 1947) | ನಂ. ೧೬೪<br>No. 164 |
|---|---|---|


ಕರ್ನಾಟಕ ಸರ್ಕಾರ

ಕಂದಾಯ ಇಲಾಖೆ

**ಜಿಲ್ಲಾಧಿಕಾರಿ ಹಾಗೂ ಜಿಲ್ಲಾದಂಡಾಧಿಕಾರಿಯವರ ಕಛೇರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ**

**1ನೇ ಮಹಡಿ, ಜಿಲ್ಲಾಡಳಿತ ಭವನ, ಬೀರಸಂದ್ರ ಗ್ರಾಮ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ. ಇ–ಮೇಲ್:deo.bangalorer3@gmail.com**

---

ನಂ: BRDC-ELE0ELN2/4/2026 ದಿನಾಂಕ:17.02.2026

**<u>ತಿದುಪಡಿ ಅಧಿಸೂಚನೆ–2</u>**

ವಿಷಯ: 2020–2025ನೇ ಸಾಲಿಗೆ ರಚಿತವಾಗಿದ್ದ ಗ್ರಾಮ ಪಂಚಾಯತಿಗಳ ಅವಧಿಯು ಮುಕ್ತಾಯವಾಗುತ್ತಿರುವ ಗ್ರಾಮ ಪಂಚಾಯತಿಗಳಿಗೆ ಆಡಳಿತಾಧಿಕಾರಿಗಳನ್ನು ಪರಿಷ್ಕರಿಸಿ ನೇಮಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಪತ್ರ ಸಂಖ್ಯೆ ಸಂ:ಗ್ರಾಅಪಂ:1003:ಗ್ರಾಪಂಅ:2025, ದಿನಾಂಕ: 16.01.2026

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ, ದೇವನಹಳ್ಳಿ, ಹೊಸಕೋಟೆ ತಾಲ್ಲೂಕಿನ ಗ್ರಾಮ ಪಂಚಾಯತಿಗೆ ಈ ಕಛೇರಿಯ ಸಮಸಂಖ್ಯೆ ಅಧಿಸೂಚನೆ ದಿನಾಂಕ:31.01.2026ರಂತೆ ಆಡಳಿತಾಧಿಕಾರಿಯನ್ನಾಗಿ ನೇಮಕ ಮಾಡಲಾಗಿದ್ದ ಕೆಳಕಂಡ ಕೋಷ್ಟಕದ ಅಂಕಣ(4)ರಲ್ಲಿ ತೋರಿಸಿರುವ ಅಧಿಕಾರಿಗಳ **ಬದಲಿಗೆ** ಅಂಕಣ(5)ರಲ್ಲಿ ತೋರಿಸಿರುವ ಅಧಿಕಾರಿಗಳನ್ನು ಗ್ರಾಮ ಪಂಚಾಯತಿಗಳಿಗೆ ಆಡಳಿತಾಧಿಕಾರಿಗಳನ್ನಾಗಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 321ರಡಿಯಲ್ಲಿ ನೇಮಕ ಮಾಡಿದೆ. ಈ ಅಧಿಸೂಚನೆಯ ಮೂಲಕ ನೇಮಕ ಮಾಡಿರುವ ಅಂದರೆ ಅಂಕಣ(5)ರಲ್ಲಿ ನಮೂದಿಸಿರುವ ಅಧಿಕಾರಿಯು ಆಡಳಿತಾಧಿಕಾರಿಯಾಗಿ ಪ್ರಭಾರವನ್ನು ವಹಿಸಿಕೊಂಡು, ಮುಂದಿನ ಆದೇಶದವರೆಗೆ ಅಥವಾ ಈ ಗ್ರಾಮ ಪಂಚಾಯತಿಯ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಹುದ್ದೆಗಳಿಗೆ ಚುನಾವಣೆಯು ನಡೆಯುವವರೆಗೆ ಸರ್ಕಾರದ ಸುತ್ತೋಲೆ ನೀಡಿರುವ ನಿರ್ದೇಶನಗಳಂತೆ ಆಡಳಿತಾಧಿಕಾರಿಯಾಗಿ ಕಾರ್ಯ ನಿರ್ವಹಿಸಲು ಆದೇಶಿಸಿದೆ.

**<u>ಕೋಷ್ಟಕ</u>**

| ಕ್ರ. ಸಂ | ತಾಲ್ಲೂಕು | ಗ್ರಾಮ ಪಂಚಾಯತಿ ಹೆಸರು | ನೇಮಕ ಮಾಡಲಾದ ಆಡಳಿತಾಧಿಕಾರಿಯ ಪದನಾಮ | ಬದಲಿ ನೇಮಕ ಮಾಡಲಾದ ಆಡಳಿತಾಧಿಕಾರಿಯ ಪದನಾಮ |
|---|---|---|---|---|
| 1 | 2 | 3 | 4 | 5 |
| 1 | ದೇವನಹಳ್ಳಿ | ವೆಂಕಟಗಿರಿಕೋಟೆ | ವಲಯ ಅರಣ್ಯಾಧಿಕಾರಿ, ಪ್ರಾದೇಶಿಕ ಅರಣ್ಯ ಇಲಾಖೆ ದೇವನಹಳ್ಳಿ | ಸಹಾಯಕ ನಿರ್ದೇಶಕರು ಗ್ರೇಡ್–1 ಸಮಾಜ ಕಲ್ಯಾಣ ಇಲಾಖೆ, ದೇವನಹಳ್ಳಿ |

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



| | | | | |
|---|---|---|---|---|
| 2 | ದೊಡ್ಡಬಳ್ಳಾಪುರ | ಕೋಡಿಹಳ್ಳಿ & ಕೆಸ್ತೂರು | ವಲಯ ಅರಣ್ಯಾಧಿಕಾರಿ, ಪ್ರಾದೇಶಿಕ ಅರಣ್ಯ ಇಲಾಖೆ ದೊಡ್ಡಬಳ್ಳಾಪುರ | ಕಾರ್ಯನಿರ್ವಹಣಾಧಿಕಾರಿ, ತಾಲ್ಲೂಕು ಪಂಚಾಯಿತಿ ಕಾರ್ಯಾಲಯ, ದೊಡ್ಡಬಳ್ಳಾಪುರ ತಾಲ್ಲೂಕು |
| 3 | ಹೊಸಕೋಟೆ | ಲಕ್ಕೊಂಡನಹಳ್ಳಿ | ವಲಯ ಅರಣ್ಯಾಧಿಕಾರಿ, ಪ್ರಾದೇಶಿಕ ಅರಣ್ಯ ಇಲಾಖೆ ದೇವನಹಳ್ಳಿ | ಹಿರಿಯ ಸಹಾಯಕ ನಿರ್ದೇಶಕರು ತೋಟಗಾರಿಕೆ ಇಲಾಖೆ ಹೊಸಕೋಟೆ ತಾಲ್ಲೂಕು |
| 4 | ದೊಡ್ಡಬಳ್ಳಾಪುರ | ಕನಸವಾಡಿ ಮತ್ತು ಹೊನ್ನಾವಾರ | ಸಹಾಯಕ ನಿರ್ದೇಶಕರು, ಮೀನುಗಾರಿಕೆ ಇಲಾಖೆ, ದೊಡ್ಡಬಳ್ಳಾಪುರ ತಾಲ್ಲೂಕು | ಸಹಾಯಕ ಲೆಕ್ಕಾಧಿಕಾರಿ, ಕಾರ್ಯನಿರ್ವಾಹಕ ಅಧಿಕಾರಿಗಳ ಕಛೇರಿ, ದೊಡ್ಡಬಳ್ಳಾಪುರ |

ಆಡಳಿತಾಧಿಕಾರಿಯಾಗಿ ಪ್ರಭಾರ ವಹಿಸಿಕೊಂಡ ದಿನ ಆಯಾ ಗ್ರಾಮ ಪಂಚಾಯತಿಯ ನಡವಳಿ ವಹಿಯಲ್ಲಿ ಪ್ರಭಾರ ವಹಿಸಿಕೊಂಡಿದ್ದನ್ನು ಅಧಿಕೃತವಾಗಿ ದಾಖಲಿಸುವುದು ಮತ್ತು ಆಡಳಿತಾಧಿಕಾರಿಯಾಗಿ ಪ್ರಭಾರ ವಹಿಸಿಕೊಂಡ ಬಗ್ಗೆ ಈ ಕಛೇರಿಗೆ ವರದಿ ಸಲ್ಲಿಸಲು ನಿರ್ದೇಶಿಸಿದೆ.

(ಬಸವರಾಜು ಎ ಬಿ, ಭಾ.ಆ.ಸೇ)
ಜಿಲ್ಲಾಧಿಕಾರಿ,
ಬೆಂಗಳೂರು ಗ್ರಾಮಾಂತರ ಜಿಲ್ಲೆ.

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು
THAMMAIAH